**SRI DEVARAJ URS ACADEMY OF HIGHER EDUCATION & RESEARCH**
**SRI DEVARAJ URS MEDICAL COLLEGE**
**Tamaka, Kolar**

**UINIVERSITY LIBRARY & LEARNING RESOURCE CENTRE**

Online Newspaper Clipping Service
**Dated, Saturday 11th March – 2017**

**ಪ್ರಜಾವಾಣಿ**

**Pg.No.10**

## ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ದಿವ್ಯಾ ಗೋಪಿನಾಥ್

# ಮಹಿಳೆ ಅಡುಗೆ ಕೋಣೆಗೆ ಸೀಮಿತವಲ್ಲ

ಕೋಲಾರ: ನಗರದ ದೇವರಾಜ ಅರಸು ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆಯ ಮಹಿಳಾ ಸಬಲೀಕರಣ ಸಂಘದ ವತಿಯಿಂದ ಈಚೆಗೆ ಅಂತರ ರಾಷ್ಟ್ರೀಯ ಮಹಿಳಾ ದಿನಾಚರಣೆ ಆಚರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ದಿವ್ಯಾ ಗೋಪಿನಾಥ್, '21ನೇ ಶತಮಾನದಲ್ಲಿ ಮಹಿಳೆಯರು ಕೇವಲ ಅಡುಗೆ ಕೋಣೆಗೆ ಸೀಮಿತವಾಗಿಲ್ಲ. ಮಹಿಳೆಯರು ವಿವಿಧ ಕ್ಷೇತ್ರಗಳಲ್ಲಿ ಅಪ್ರತಿಮ ಸಾಧನೆ ಮಾಡುತ್ತಿದ್ದಾರೆ. ಅಲ್ಲದೇ, ಆರ್ಥಿಕ ಸ್ವಾವಲಂಬಿಗಳಾಗಿ ಉತ್ತಮ ಭವಿಷ್ಯ ರೂಪಿಸಿಕೊಂಡಿದ್ದಾರೆ' ಎಂದು ಹೇಳಿದರು.

ಸಾಮಾಜಿಕ ಕ್ಷೇತ್ರದಲ್ಲಿ ಮಹಿಳಾ ಸಬಲೀಕರಣಕ್ಕೆ ಹೆಚ್ಚು ಪ್ರಾಮುಖ್ಯತೆ ಸಿಗುತ್ತಿಲ್ಲ. ಮಹಿಳಾ ಸಬಲೀಕರಣಕ್ಕೆ ಪುರುಷರ ಸಹಕಾರ ಮುಖ್ಯ. ತಾಯಿಯಾಗಿ, ಹೆಂಡತಿಯಾಗಿ, ಮನೆಯ ಒಡತಿಯಾಗಿ ಮಹಿಳೆ ಮಾಡುವ ಸೇವೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಪ್ರತಿ ಪುರುಷನ ಸಾಧನೆ ಹಿಂದೆ ಮಹಿಳೆಯ ಪಾತ್ರ ಇರುತ್ತದೆ. ಪುರುಷ ಸಮಾಜ ಮಹಿಳೆಯರಿಗೆ ಗೌರವ ಕೊಡುವುದನ್ನು ಕಲಿಯಬೇಕು ಎಂದು ಸಲಹೆ ನೀಡಿದರು.

ಮಹಿಳಾ ದಿನಾಚರಣೆ ಕೇವಲ ಒಂದು ದಿನಕ್ಕೆ ಸೀಮಿತವಾಗಬಾರದು. ಮಹಿಳೆಯರ ಹಕ್ಕುಗಳ ದಮನ, ಮಹಿಳೆಯರ ಮೇಲಿನ ಶೋಷಣೆ ಹಾಗೂ ಅತ್ಯಾಚಾರ ಪ್ರಕರಣಗಳಿಗೆ ಕಡಿವಾಣ ಹಾಕಿದಾಗ ಮಹಿಳಾ ದಿನಾಚರಣೆಗೆ ಅರ್ಥ ಬರುತ್ತದೆ. ಮಹಿಳೆಯರು ತಾವು ಅಬಲೆಯರೆಂಬ ಭಾವನೆ ಬಿಟ್ಟು ಸಾಧನೆಯತ್ತ ಗಮನಹರಿಸಬೇಕು. ಅವಕಾಶಗಳನ್ನು ಬಳಸಿಕೊಂಡು ಸ್ವಪ್ರಯತ್ನದಿಂದ ಜೀವನದಲ್ಲಿ ಮುಂದೆ ಬರಬೇಕು ಎಂದು ಕರೆ ನೀಡಿದರು.

ಮಹಿಳಾ ದಿನಾಚರಣೆ ಅಂಗವಾಗಿ ಕಾಲೇಜಿನ ಮಹಿಳಾ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳಿಗೆ ಗಾಯನ ಹಾಗೂ ಚರ್ಚಾ ಸ್ಪರ್ಧೆ ಆಯೋಜಿಸಲಾಗಿತ್ತು. ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು. ದೇವರಾಜ ಅರಸು ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆ ಉಪ ಕುಲಪತಿ ಡಾ.ಸಿ.ರಘುವೀರ್, ಪ್ರಾಂಶುಪಾಲ ಡಾ.ಎಂ.ಎಲ್.ಹರೇಂದ್ರಕುಮಾರ್, ಸ್ನಾತಕೋತ್ತರ ನಿರ್ದೇಶಕ ಡಾ.ಎಸ್.ಆರ್.ಪ್ರಸಾದ್, ವೈದ್ಯಕೀಯ ಅಧೀಕ್ಷಕ ಡಾ.ಮೋಹನ್‌ಕುಮಾರ್, ಮಹಿಳಾ ಸಬಲೀಕರಣ ಸಂಘದ ಅಧ್ಯಕ್ಷೆ ಡಾ.ವಿ.ಆರ್.ಸುಧಾರೆಡ್ಡಿ ಇದ್ದರು.



ಕೋಲಾರದ ದೇವರಾಜ ಅರಸು ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆಯಲ್ಲಿ ಈಚೆಗೆ ಆಯೋಜಿಸಿದ್ದ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ದಿವ್ಯಾ ಗೋಪಿನಾಥ್ ಉದ್ಘಾಟಿಸಿದರು